**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ:** 1061/2021 **CW**-7 **PW**-7

**ಸಾಕ್ಷಿಯನ್ನು ದಿಃ 07.01.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಡಾ. ವರದರಾಜು |
| ತಂದೆಯ ಹೆಸರುಃ | ಯಲ್ಲೇಗೌಡ |
| ವಯಸ್ಸುಃ | 44 ವರ್ಷ |
| ವೃತ್ತಿಃ | ವೈದ್ಯಾಧಿಕಾರಿ, ಬಾಗೂರು ಪ್ರಾ.ಆ.ಕೇಂದ್ರ, |
| ವಾಸ ಸ್ಥಳಃ | ಚನ್ನರಾಯಪಟ್ಟಣ |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿಃ 03.05.2021 ರಂದು ನನ್ನನ್ನು ಚನ್ನರಾಯಪಟ್ಟಣದ ಸರ್ಕಾರಿ ಆಸ್ಪತ್ರೆಗೆ ಬೆಳಗ್ಗೆ 8.00 ಗಂಟೆಯಿಂದ ರಾತ್ರಿ 8.00 ಗಂಟೆಯವರೆಗೆ ನನ್ನನ್ನು ಕರ್ತವ್ಯಕ್ಕೆ ನೇಮಿಸಿರುತ್ತಾರೆ.

ನಾನು ಕರ್ತವ್ಯದಲ್ಲಿದ್ದಾಗ ಸಂಜೆ 6.45 ರ ಸಮಯದಲ್ಲಿ ಚಾಸಾ-1 ರವರು ಹಲ್ಲೆಯ ಹಿನ್ನೆಲೆಯಲ್ಲಿ ಗಾಯಗೊಂಡು ಚಿಕಿತ್ಸೆ ಪಡೆದುಕೊಳ್ಳಲು ನಮ್ಮ ಆಸ್ಪತ್ರೆಗೆ ಬಂದಿರುತ್ತಾರೆ. ಸದರಿಯವರು ಧರ್ಮರವರು ಹಲ್ಲೆ ಮಾಡಿರುವುದಾಗಿ ತಿಳಿಸಿರುತ್ತಾರೆ. ಇವರನ್ನು ಪರೀಕ್ಷಿಸಿದಾಗ ಸದರಿಯವರಿಗೆ ತಲೆಯ ಭಾಗದಲ್ಲಿ 3x1x1 c.m ರ ಹರಿದ ಗಾಯವಾಗಿದ್ದು ಸಾಧಾರಣ ಸ್ವರೂಪದ ಗಾಯವಾಗಿತ್ತು ಎಂಬುದಾಗಿ ನನ್ನ ಗಾಯದ ಪ್ರಮಾಣ ಪತ್ರದಲ್ಲಿ ನಮೂದಿಸಿ ನೀಡಿರುತ್ತೇನೆ.

ಸಾಕ್ಷಿಗೆ ಗಾಯದ ಪ್ರಮಾಣ ಪತ್ರವನ್ನು ತೋರಿಸಲಾಗಿ, ಅದನ್ನು ಈಗಾಗಲೇ ನೋಡಿ ಗುರುತಿಸಿದ್ದು, ಅದನ್ನು ನಿಪಿ-5 ಎಂದು, ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು.

ಸಾಕ್ಷಿ ಎಂಎಲ್ ಸಿ ಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–6 ಎಂದು ಗುರುತಿಸಲಾಯಿತು. ಯಾವುದೇ ರೀತಿ ಮರದ ದೊಣ್ಣೆಯಿಂದ ಹೊಡೆದಾಗಲೂ ನಿಪಿ–5 ರಲ್ಲಿ ನಮೂದಿಸಿರುವಂತೆ ಗಾಯ ಆಗುವ ಸಾಧ್ಯತೆ ಇರುತ್ತದೆ.

**ಪಾಟೀ ಸವಾಲುಃ – ಆರೋಪಿ ಪರ ಶ್ರೀ ಡಿ ಕೆ ಎಂ ವಕೀಲರಿಂದ**

ಗಾಯಾಳು ಬೇರೆ ಕಡೆ ಎಲ್ಲಿಯೂ ಚಿಕಿತ್ಸೆ ಪಡೆದಿರಲಿಲ್ಲ. ನಿಪಿ–5 ರಲ್ಲಿ ದೇಹದ ಯಾವ ಭಾಗದಲ್ಲಿ ಗಾಯವಾಗಿದೆ ಎಂದು ನಮೂದಿಸಿಲ್ಲ ಎಂದರೆ ಸರಿ. ನಿಪಿ–6 ರಲ್ಲಿರುವ ಶಾಹಿ ಬೇರೆ ಬೇರೆ ಶಾಹಿಗಳಾಗಿವೆ ಎಂದರೆ ಸರಿಯಲ್ಲ. ಚಾಸಾ–1 ರವರು ಬೇರೆ ರೀತಿಯಲ್ಲಿ ಗಾಯಪಡಿಸಿಕೊಂಡಿದ್ದರೂ ಹಲ್ಲೆಯಿಂದ ಎಂದು ನನಗೆ ತಪ್ಪು ಮಾಹಿತಿ ನೀಡಿದ್ದಾರೆ ಎಂದರೆ ಸರಿಯಲ್ಲ. ಚಾಸಾ–1 ರವರಿಗೆ ಸಹಾಯವಾಗಲಿ ಎಂದು ಸುಳ್ಳು ಗಾಯದ ಪ್ರಮಾಣ ಪತ್ರವನ್ನು ನೀಡಿ ಸುಳ್ಳು ಸಾಕ್ಷವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಃ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).**

**ಓ ಹೇ ಕೇ ಸರಿ ಇದೆ.**

**(ಕುಸುಮ ವಿ .)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**